**ಕರ್ನಾಟಕ ಸರ್ಕಾರ**

ಸಂಖ್ಯೆ : ಸಂಕಇ೩೯ ಕೆಓಎಲ್ ೨೦೦೨

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ : ೧೩-೦೬-೨೦೦೨

## ಸುತ್ತೋಲೆ

ವಿಷಯ : ಆಡಳಿತದಲ್ಲಿ ಕನ್ನಡ ಬಳಕೆ ಮಾಡದೇ ಇರುವ ನೌಕರರ ವಿರುದ್ಧ ಶಿಸ್ತು ಕ್ರಮವನ್ನು ಜಾರಿಗೊಳಿಸುವ ಬಗ್ಗೆ.

ಉಲ್ಲೇಖ : (೧) ದಿನಾಂಕ ೧೧-೪-೨೦೦೦ರ ಸುತ್ತೋಲೆ ಸಂಖ್ಯೆ : ಸಂಕಇ ೨೯ ಕೆಓಎಲ್ ೨೦೦೦

(೨) ಪ್ರೊ. ಬರಗೂರು ರಾಮಚಂದ್ರಪ್ಪ, ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾದಿಕಾರ, ಇವರು ಮುಖ್ಯ ಕಾರ್ಯದರ್ಶಿಯವರಿಗೆ ಉದ್ದೇಶಿಸಿ ಬರೆದ ದಿನಾಂಕ ೧೮-೪-೨೦೦೨ರ ಅ.ಸ. ಪತ್ರ ಸಂಖ್ಯೆ : ಕ.ಅ.ಪ್ರಾ: ಅ: ೧೪೪:೨೦೦೨

೧. ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, ೧೯೯೪ರ ಅಡಿಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರವನ್ನು ರಚಿಸಲಾಗಿದೆ. ಇದೊಂದು ಶಾಸನಬದ್ಧ ಪ್ರಾಧಿಕಾರವಾಗಿದೆ. ಸದರಿ ಅಧಿನಿಯಮದ ಕಲಂ ೧೯ ರನ್ವಯ ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಪ್ರಕಾರ್ಯ ಒಂದನ್ನು ವಹಿಸಲಾಗಿದ್ದು, ಅದನ್ನು ಈ ಕೆಳಗೆ ಉದ್ಧರಿಸಿದೆ.

''೧೯. ಕರ್ತವ್ಯ ಲೋಪವನ್ನು ದಾಖಲಿಸುವ ಮತ್ತು ನೇಮಕಾತಿ ಪ್ರಾಧಿಕಾರಕ್ಕೆ ತಿಳಿಸುವ ಅಧಿಕಾರ : ಪ್ರಾಧಿಕಾರವು ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವ ಸಲುವಾಗಿ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಅಥವಾ ಈಗಾಗಲೇ ಜಾರಿಯಲ್ಲಿರುವ ಯಾವುದೇ ಆದೇಶವನ್ನು ರಾಜ್ಯ ಸರ್ಕಾರ ಮತ್ತು ಸ್ಥಳೀಯ ನಿಕಾಯಗಳ ಅಧಿಕಾರಿಗಳು ಮತ್ತು ನೌಕರರು ಉಲ್ಲಂಘಿಸಿದರೆ, ಅಂತಹ ಉಲ್ಲಂಘನೆಯನ್ನು ಕರ್ತವ್ಯ ಲೋಪವೆಂದು ದಾಖಲಿಸತಕ್ಕದ್ದು ಮತ್ತು ಅಂತಹ ವ್ಯಕ್ತಿಗಳ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳುವಂತೆ ನೇಮಕಾತಿ ಪ್ರಾಧಿಕಾರಕ್ಕೆ ಸಲಹೆಗಳನ್ನು

ನೀಡತಕ್ಕದ್ದು''

೨. ಮೇಲೆ (೧)ರಲ್ಲಿ ಉಲ್ಲೇಖಿಸಲಾದ ದಿನಾಂಕ ೧೧-೪-೨೦೦೦ರ ಸುತ್ತೋಲೆಯಲ್ಲಿ ಈ ಕೆಳಕಂಡ ಅಂಶಗಳು ಒಳಗೊಂಡಿವೆ :

೧) ಆಡಳಿತದಲ್ಲಿ ಕನ್ನಡ ಬಳಕೆ ಮಾಡುವುದಕ್ಕೆ ಸಂಬಂಧಿಸಿದ ಒಂದು ಅಧಿನಿಯಮ ಹಾಗೂ ೧೨ ಸುತ್ತೋಲೆ, ಅಧಿಕೃತ ಜ್ಞಾಪನ ಮತ್ತು ಆದೇಶಗಳನ್ನು ಅದರಲ್ಲಿ ಉಲ್ಲೇಖಿಸಲಾಗಿದೆ : ಮತ್ತು

೨) ಅದರಲ್ಲಿ ಉಲ್ಲೇಖಿಸಲಾದ ಸೂಚನೆಗಳನ್ನು ಉಲ್ಲಂಘಿಸಿದವರ ವಿರುದ್ಧ ಶಿಸ್ತಿನ ಕ್ರಮ ತೆಗೆದುಕೊಳ್ಳಲಾಗುವುದೆಂದು ಸಹ ಅದರಲ್ಲಿ ಸೂಚಿಸಲಾಗಿದೆ.

೩. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಮೇಲೆ (೨) ರಲ್ಲಿ ಉಲ್ಲೇಖಿಸಿದ ದಿನಾಂಕ ೧೭-೪-೨೦೦೨ರ ಅ.ಸ. ಪತ್ರದಲ್ಲಿ ಇತರೆ ವಿಷಯಗಳ ಜೊತೆಗೆ, ಆಡಳಿತದಲ್ಲಿ ಕನ್ನಡವನ್ನು ಬಳಕೆ ಮಾಡದೇ ಇರುವ ಸರ್ಕಾರಿ ನೌಕರರ ವಿರುದ್ಧ ಶಿಸ್ತಿನ ಕ್ರಮವನ್ನು ತೆಗೆದುಕೊಳ್ಳುವ ಬಗ್ಗೆ ಪ್ರಸ್ತಾಪಿಸಲಾಗಿದೆ.

೪. ಕರ್ನಾಟಕ ಸಿವಿಲ್ ಸೇವೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, ೧೯೫೭ರ ನಿಯಮ ೨(ಗ)ರಲ್ಲಿ 'ಶಿಸ್ತಿನ ಪ್ರಾಧಿಕಾರ' ಎನ್ನುವ ಪದವನ್ನು ವ್ಯಾಖ್ಯಾನಿಸಲಾಗಿದೆ. ಅದರನ್ವಯ, ಶಿಸ್ತಿನ ಪ್ರಾಧಿಕಾರ ಅಂದರೆ, ಸಂಬಂಧಿಸಿದ ಸರ್ಕಾರಿ ನೌಕರನ ಮೇಲೆ, ಸದರಿ ನಿಯಮಗಳ ಅಡಿಯಲ್ಲಿ ದಂಡನೆಯನ್ನು ವಿಧಿಸಲು ಸಕ್ಷಮವಾಗಿರುವ ಪ್ರಾಧಿಕಾರ. ಅದೇ ನಿಯಮಗಳ ನಿಯಮ ೨(ಕ)ದಲ್ಲಿ 'ನೇಮಕಾತಿ ಪ್ರಾಧಿಕಾರ' ಎನ್ನುವ ಪದವನ್ನು ವ್ಯಾಖ್ಯಾನಿಸಲಾಗಿದೆ. ಆ ನಿಯಮಗಳಲ್ಲಿ ಒಳಗೊಂಡ ಅನುಸೂಚಿಗಳಲ್ಲಿ ಪ್ರತಿಯೊಂದು ಇಲಾಖೆಯ ಸರ್ಕಾರಿ ನೌಕರನಿಗೆ ಸಂಬಂಧಿಸಿದಂತೆ ಶಿಸ್ತಿನ ಪ್ರಾಧಿಕಾರ ಯಾರು ? ಹಾಗೂ ನೇಮಕಾತಿ ಪ್ರಾಧಿಕಾರ ಯಾರು ? ಎನ್ನುವುದನ್ನು ನಿರ್ದಿಷ್ಟಪಡಿಸಲಾಗಿದೆ.

೫. ಕಂಡಿಕೆ-೧ರಲ್ಲಿ ಉದ್ಧರಿಸಿದ ಉಪಬಂಧದ ಅನ್ವಯ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಸಂಬಂಧಿಸಿದ ಸರ್ಕಾರಿ ನೌಕರರ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳುವಂತೆ ನೇಮಕಾತಿ ಪ್ರಾಧಿಕಾರಕ್ಕೆ ಸಲಹೆಯನ್ನು ನೀಡಿದ ಸಂದರ್ಭದಲ್ಲಿ, ಅಂತಹ ಸರ್ಕಾರಿ ನೌಕರನ ವಿರುದ್ಧ ಶಿಸ್ತಿನ ಕ್ರಮವನ್ನು ಸಕ್ಷಮ ಪ್ರಾಧಿಕಾರ ಆರಂಭಿಸಬೇಕೆಂದು ಈ ಮೂಲಕ ಸೂಚಿಸಿದೆ. ಅಂತಹ ಕ್ರಮವನ್ನು. ಕಂಡಿಕೆ-೪ರಲ್ಲಿ ಉಲ್ಲೇಖಿಸಿದ ನಿಯಮಗಳ ನಿಯಮ ೧೨ರ ಅಡಿಯಲ್ಲಿ ಆರಂಭಿಸತಕ್ಕದ್ದು. ಅದರಂತೆ, ಆ ನಿಯಮದ ಅಡಿಯಲ್ಲಿ ಜರುಗಿಸಿದ ಶಿಸ್ತಿನ ನಡವಳಿಗಳಲ್ಲಿ ಈ ಕೆಳಕಂಡ ದಂಡನೆಗಳ ಪೈಕಿ ದಂಡನೆಯೊಂದನ್ನು ವಿಧಿಸಬಹುದು :-

i) ವಾಗ್ದಂಡನೆ ; ಅಥವಾ

ii) ವಾರ್ಷಿಕ ವೇತನ ಬಡ್ತಿಯನ್ನು ತಡೆ ಹಿಡಿಯುವುದು ; ಅಥವಾ

iii) ಪದೋನ್ನತಿಯನ್ನು ತಡೆ ಹಿಡಿಯುವುದು ; ಅಥವಾ

iv) ಕಾಲವೇತನ ಶ್ರೇಣಿಯಲ್ಲಿ ಕೆಳಗಿನ ಹಂತಕ್ಕೆ ಇಳಿಸುವುದು

೬. ಕಂಡಿಕೆ-೧ರಲ್ಲಿ ಉಲ್ಲೇಖಿಸಿದ ಕಲಂ ೧೯ರಡಿಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮಾಡಿದ ಸಲಹೆಗಳ ಆಧಾರದ ಮೇಲೆ, ಕಂಡಿಕೆ-೫ರಲ್ಲಿ ಸೂಚಿಸಿದ ಕಾರ್ಯವಿಧಾನವನ್ನು ಅನುಸರಿಸಿ, ಮೂರುತಿಂಗಳೊಳಗಾಗಿ ಶಿಸ್ತಿನ ಕ್ರಮವನ್ನು ಪೂರ್ಣಗೊಳಿಸತಕ್ಕದ್ದು. ಆ ರೀತಿ ತೆಗೆದುಕೊಂಡ ಕ್ರಮದ ಕುರಿತು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ತಿಳಿಸತಕ್ಕದ್ದು.

೭. ಕಂಡಿಕೆ-೧ರಲ್ಲಿ ಉದ್ಧರಿಸಿದ ಕಲಂ ೧೯ರಡಿಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ನೀಡಿದ ಸಲಹೆಗಳ ಮೇಲೆ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರ ಮೇಲೆ ಸೂಚಿಸಿದಂತೆ ಕ್ರಮ ತೆಗೆದುಕೊಳ್ಳದೇ ಇದ್ದಲ್ಲಿ, ಅಂತಹ ನೇಮಕಾತಿ ಪ್ರಾಧಿಕಾರವನ್ನು ಸಕ್ಷಮ ಪ್ರಾಧಿಕಾರ, ಕರ್ತವ್ಯಲೋಪದ ಆರೋಪದ ಮೇಲೆ, ಶಿಸ್ತಿನ ಕ್ರಮಕ್ಕೆ ಒಳಪಡಿಸತಕ್ಕದ್ದು.

೮. ಈ ಸೂಚನೆಗಳು, ಸರ್ಕಾರದ ಅಧೀನದಲ್ಲಿ ಬರುವ ನಿಗಮ, ಮಂಡಳಿ, ಕಂಪೆನಿ, ಸಾರ್ವಜನಿಕ ಉದ್ದಿಮೆಗಳು ಇವುಗಳಿಗೆ ಮತ್ತು ವಿಶ್ವವಿದ್ಯಾಲಯಗಳಿಗೆ ಹಾಗೂ ಸ್ಥಳೀಯ ಸಂಸ್ಥೆಗಳಿಗೂ ಸಹ ಅನ್ವಯಿಸುತ್ತವೆ.

೯. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ಈ ಸುತ್ತೋಲೆಯಲ್ಲಿ ಒಳಗೊಂಡ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು ಹಾಗೂ ಅವರವರ ವ್ಯಾಪ್ತಿಯಲ್ಲಿ ಬರುವ ಇಲಾಖೆ ಮುಖ್ಯಸ್ಥರು ಹಾಗೂ ಕಂಡಿಕೆ - ೮ರಲ್ಲಿ ಉಲ್ಲೇಖಿಸಿದ ಸ್ವಾಯತ್ತ ಸಂಸ್ಥೆಗಳು ಅದನ್ನು ಪಾಲಿಸುವಂತೆ ನೋಡಿಕೊಳ್ಳತಕ್ಕದ್ದು.

**(ಎ. ರವೀಂದ್ರ)**

ಸರ್ಕಾರದ ಮುಖ್ಯ ಕಾರ್ಯದರ್ಶಿ

ಗೆ,

೧. ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು (ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಣೆಗಾಗಿ)

೨. ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ, ಬೆಂಗಳೂರು

ಪ್ರತಿ :

೧. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು

೨. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು

೩. ಅಪರ ಮುಖ್ಯ ಕಾರ್ಯದರ್ಶಿಗಳು, ಲೋಕೋಪಯೋಗಿ ಮತ್ತು ವಸತಿ ಇಲಾಖೆ

೪. ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಪ್ರಧಾನ ಕಾರ್ಯದರ್ಶಿಗಳು, ಅರಣ್ಯ, ಜೀವಿ ಪರಿಸ್ಥಿತಿ ಶಾಸ್ತ್ರ ಮತ್ತು ಪರಿಸರ ಇಲಾಖೆ.

೫. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು

೬. ಮುಖ್ಯ ಮಂತ್ರಿಗಳ ಕಾರ್ಯದರ್ಶಿಗಳು

೭. ಎಲ್ಲಾ ವಿಭಾಗಾಧಿಕಾರಿಗಳು

೮. ಎಲ್ಲಾ ಇಲಾಖಾ ಮುಖ್ಯಸ್ಥರುಗಳು

೯. ಎಲ್ಲಾ ಜಿಲ್ಲಾಧಿಕಾರಿಗಳು

೧೦. ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

೧೧. ಸರ್ಕಾರದ ಎಲ್ಲಾ ಹೆಚ್ಚುವರಿ/ ಜಂಟಿ/ ಉಪ/ ಅಧೀನ ಕಾರ್ಯದರ್ಶಿಗಳು

೧೨. ಎಲ್ಲಾ ವಿಶ್ವವಿದ್ಯಾಲಯಗಳ ಉಪಕುಲಸಚಿವರು

೧೩. ರಾಜ್ಯದ ಎಲ್ಲಾ ಪುರ/ನಗರಸಭೆಗಳ ಮುಖ್ಯಾಧಿಕಾರಿಗಳು/ ಆಡಳಿತಾಧಿಕಾರಿಗಳು

೧೪. ರಾಜ್ಯದ ಎಲ್ಲಾ ನಿಗಮಗಳ ಮುಖ್ಯ ವ್ಯವಸ್ಥಾಪಕರುಗಳು/ವ್ಯವಸ್ಥಾಪಕ ನಿರ್ದೇಶಕರು

೧೫. ರಾಜ್ಯದ ಎಲ್ಲಾ ಮಂಡಳಿಗಳ ಕಾರ್ಯದರ್ಶಿಗಳು/ವ್ಯವಸ್ಥಾಪಕ ನಿರ್ದೇಶಕರು

೧೬. ಎಲ್ಲಾ ಸಚಿವರ ಮತ್ತು ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು

೧೭. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು

೧೮. ಉಪ ಕಾರ್ಯದರ್ಶಿಗಳು, ಸಚಿವ ಸಂಪುಟ ವ್ಯವಹಾರಗಳ ಇಲಾಖೆ

೧೯. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖಾಧಿಕಾರಿಗಳು

೨೦. ಶಾಖಾ ರಕ್ಷಾ ಕಡತ